13 (3)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: "ಕರ್ನಾಟಕ ಅಂತರ್‌ಗಂಗಾ ಸೂಕ್ಷ್ಮ ನೀರಾವರಿ ನಿಗಮದ ಆಡಳಿತ ಮಂಡಳಿಯ ನಿರ್ದೇಶಕರ ಸಂಖ್ಯೆಯನ್ನು ಕಡಿಮೆಗೊಳಿಸುವ ಬಗ್ಗೆ."

**ಸರ್ಕಾರದ ಆದೇಶ ಸಂಖ್ಯೆ: ಕೃತೋಇ/32/ಕೃಯೋಕಾ/2010, ಬೆಂಗಳೂರು, ದಿನಾಂಕ:18-01-2013.**

ಓದಲಾಗಿದೆ: 1. **ಆದೇಶ ಸಂಖ್ಯೆ: ಕೃತೋಇ 32 ಕೃಯೋಕಾ 2010, ದಿನಾಂಕ: 08.09.2011**

2. ಅಪರ ಕೃಷಿ ನಿರ್ದೇಶಕರು (ಮಾನವ ಸಂಪನ್ಮೂಲ ಅಭಿವೃದ್ಧಿ) ಹಾಗೂ ವ್ಯವಸ್ಥಾಪಕ ನಿರ್ದೇಶಕರು, ಇವರ ಪ್ರಸ್ತಾವನೆ ಪತ್ರ ದಿ: 11-04-2012 ಹಾಗೂ ದಿನಾಂಕ: 07.06.2012

ಪ್ರಸ್ತಾವನೆ:-

ಕೃಷಿ ಕ್ಷೇತ್ರದಲ್ಲಿ ವಿವಿಧ ಬೆಳೆಗಳಿಗೆ ನೀರನ್ನು ಮಿತವ್ಯಯವಾಗಿ ಬಳಸುವುದನ್ನು ಪ್ರೋತ್ಸಾಹಿಸಲು, ನೀರನ್ನು ಸಂರಕ್ಷಿಸಲು, ಅಂತರ್‌ಜಲ ಮಟ್ಟವನ್ನು ಹೆಚ್ಚಿಸಲು, ಆಹಾರ ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸುವ ಮೂಲ ಉದ್ದೇಶದಿಂದ ರಾಜ್ಯದಲ್ಲಿ ಸೂಕ್ಷ್ಮ ನೀರಾವರಿ ಯೋಜನೆಯನ್ನು 2003-04ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ.

ಮೇಲೆ ಓದಲಾದ (1)ರ ಆದೇಶದಲ್ಲಿ 2010-11ನೇ ಸಾಲಿನ ಆಯವ್ಯಯ ಭಾಷಣದಲ್ಲಿ ತಿಳಿಸಿರುವಂತೆ ರಾಜ್ಯದಲ್ಲಿ ಅಂತರ್ಜಲ ಸಂರಕ್ಷಣೆ ಹಾಗೂ ವಿದ್ಯುಚ್ಛಕ್ತಿಯ ಮಿತವ್ಯಯದ ದೃಷ್ಟಿಯಿಂದ ರೈತರು ಹನಿ ನೀರಾವರಿ ಅಥವಾ ತುಂತುರು ನೀರಾವರಿ ವ್ಯವಸ್ಥೆಯನ್ನು ಅಳವಡಿಸುವುದನ್ನು ಕಡ್ಡಾಯ ಮಾಡುವುದು ಅಗತ್ಯವಾಗಿದೆ. ಈ ವಿಷಯದಲ್ಲಿ ರೈತರಿಗೆ ಅಗತ್ಯವಿರುವ ಸಹಾಯಧನ ಮತ್ತು ತಾಂತ್ರಿಕತೆಯನ್ನು ಒದಗಿಸಲು ರಾಜ್ಯದಲ್ಲಿ 'ಅಂತರ್‌ಗಂಗಾ ಸೂಕ್ಷ್ಮ ನೀರಾವರಿ ನಿಗಮ'ವನ್ನು ಸ್ಥಾಪಿಸಲು ರೂ.100 ಕೋಟಿ ಬಂಡವಾಳವನ್ನು ಒದಗಿಸಲಾಗುವುದೆಂದು ಘೋಷಿಸಲಾಗಿದ್ದು, ಅದರನ್ವಯ ರಾಜ್ಯದಲ್ಲಿ ಕರ್ನಾಟಕ ಅಂತರ್‌ಗಂಗಾ ಸೂಕ್ಷ್ಮ ನೀರಾವರಿ ನಿಗಮವನ್ನು ಸ್ಥಾಪಿಸಿ ಆದೇಶ ಹೊರಡಿಸಲಾಗಿದೆ. ಮೇಲೆ ಓದಲಾದ (2) ರಲ್ಲಿನ ಪತ್ರದಲ್ಲಿ ಸದರಿ ಆದೇಶದನ್ವಯ ಕರ್ನಾಟಕ ಅಂತರ್‌ಗಂಗಾ ಸೂಕ್ಷ್ಮ ನೀರಾವರಿ ನಿಗಮದ ಆಡಳಿತ ಮಂಡಳಿಯ ನಿರ್ದೇಶಕರ ಸಂಖ್ಯೆಯನ್ನು 13ಕ್ಕೆ ನಿಗಧಿಪಡಿಸಲಾಗಿದ್ದು, ಆದರೆ ಈ ಆಡಳಿತ ಮಂಡಳಿಯ ನಿರ್ದೇಶಕರ ಸಂಖ್ಯೆಯನ್ನು 13 ರಿಂದ 12ಕ್ಕೆ ಕಡಿಮೆಗೊಳಿಸುವುದು ಅವಶ್ಯಕವಿರುತ್ತದೆ ಹನಿ ನೀರಾವರಿ ಹಾಗೂ ತುಂತುರು ನೀರಾವರಿ. ವಿತರಕರ ಪ್ರತಿನಿಧಿಗಳನ್ನು ಆಡಳಿತ ಮಂಡಳಿಯ ನಿರ್ದೇಶಕರನ್ನಾಗಿ ಮಾಡಿದ್ದು, ಇವರನ್ನು ಹೊರತುಪಡಿಸುವುದು ಸೂಕ್ತವಾಗಿರುತ್ತದೆ. ಹಾಗೂ ಕೃಷಿ ನಿರ್ದೇಶಕರನ್ನು ಆಡಳಿತ ಮಂಡಳಿಗೆ ಹೊಸದಾಗಿ ಸೇರಿಸುವುದು ಅವಶ್ಯವಿದ್ದು, ಅದರಂತೆ ಆದೇಶಕ್ಕೆ ಸೂಕ್ತ ತಿದ್ದುಪಡಿ ಮಾಡುವಂತೆ ಪ್ರಸ್ತಾವನೆ ಸಲ್ಲಿಸಿದೆ.

ಆದ್ದರಿಂದ, ಸರ್ಕಾರವು ಕೂಲಂಕುಷವಾಗಿ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಅದರಂತೆ ಈ ಕೆಳಕಂಡ ಆದೇಶ ಹೊರಡಿಸಿದೆ.

.....2/-

**ಆದೇಶ**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಆದೇಶ ಸಂಖ್ಯೆ: ಕೃತೋಇ 32 ಕೃಯೋಕಾ 2010, ದಿನಾಂಕ: 08.09.2011 ರನ್ವಯ ರಾಜ್ಯದಲ್ಲಿ ಕರ್ನಾಟಕ ಅಂತರ್‌ಗಂಗಾ ಸೂಕ್ಷ್ಮ ನೀರಾವರಿ ನಿಗಮವನ್ನು ಸ್ಥಾಪಿಸಿದ್ದು, ಸದರಿ ಆದೇಶದಲ್ಲಿನ ಆಡಳಿತ ಮಂಡಳಿಯ ಸಂಖ್ಯೆಯನ್ನು 13 ರಿಂದ 12ಕ್ಕೆ ಕಡಿಮೆಗೊಳಿಸಿ, ಈ ಆದೇಶದ ಅನುಬಂಧದಲ್ಲಿರುವಂತೆ ಆಡಳಿತ ಮಂಡಳಿಯನ್ನು ಪುನರ್ ರಚಿಸಲಾಗಿದೆ. ಹಾಗೂ ಇನ್ನು ಮುಂದೆ, ಈಗಾಗಲೇ ಸ್ಥಾಪನೆಗೊಂಡಿರುವ ಕರ್ನಾಟಕ ಅಂತರ್‌ಗಂಗಾ ಸೂಕ್ಷ್ಮ ನೀರಾವರಿ ನಿಗಮಕ್ಕೆ ಸಂಬಂಧಿಸಿದಂತೆ ಯಾವುದೇ ತಿದ್ದುಪಡಿ/ಸೇರ್ಪಡೆ ಮಾಡುವ ಅವಶ್ಯಕತೆ ಉಂಟಾದಲ್ಲಿ ಅದನ್ನು ಮಾನ್ಯ ಕೃಷಿ ಸಚಿವರು, ಕರ್ನಾಟಕ ಸರ್ಕಾರ ರವರ ತೀರ್ಮಾನದಂತೆ ಸೂಕ್ತ ಕ್ರಮ ತೆಗೆದುಕೊಳ್ಳಲು ಅನುಮೋದನೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ. ಆರ್. ವಿಶ್ವನಾಥಾಚಾರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಮುಂದಿನ ವಾರದ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ ಸರ್ಕಾರಕ್ಕೆ ಪ್ರಕಟಿಸಿದ 250 ಪ್ರತಿಗಳನ್ನು ಸರಬರಾಜು ಮಾಡಲು ಕೋರಿದೆ.

ಪ್ರತಿ:

1. ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯ ಮಂತ್ರಿಗಳ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ನಿರ್ದೇಶಕರು, ಪಿಎಫ್ ಡಿ/ಪಿಎಂಐ, ಯೋಜನೆ ಇಲಾಖೆ.
8. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ರೇಷ್ಮೆ ಇಲಾಖೆ, ಬೆಂಗಳೂರು.
10. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
11. ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಸಚಿವ ಸಂಪುಟ ವ್ಯವಹಾರಗಳು, (ಪ್ರಕರಣ ಸಂ:C-799/2012)
14. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ಬೆಂಗಳೂರು.
15. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ.
16. ಮಾನ್ಯ ಕೃಷಿ ಸಚಿವರ ಅಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
17. ಮಾನ್ಯ ತೋಟಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
18. ಮಾನ್ಯ ರೇಷ್ಮೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
19. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ಬೆಂಗಳೂರು.
20. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2, ಕೃಷಿ ಇಲಾಖೆ, ಬೆಂಗಳೂರು.
21. ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು), ಕೃಷಿ ಇಲಾಖೆ, ಬೆಂಗಳೂರು.
22. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಸರ್ಕಾರಿ ಆದೇಶ ಸಂಖ್ಯೆ: ಕೃತೋಇ 32 ಕೃಯೋಕಾ 2010, ದಿನಾಂಕ:18.01.2013ಕ್ಕೆ**

**ಅನುಬಂಧ**

ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮದ ಆಡಳಿತ ಮಂಡಳಿ ಸದಸ್ಯರು

| ಕ್ರ ಸಂ | ಪದನಾಮ | ಹುದ್ದೆ |
|---|---|---|
| 1 | ಮಾನ್ಯ ಕೃಷಿ ಸಚಿವರು | ಅಧ್ಯಕ್ಷರು |
| 2 | ಮಾನ್ಯ ತೋಟಗಾರಿಕೆ ಸಚಿವರು | ಉಪಾಧ್ಯಕ್ಷರು |
| 3 | ಮಾನ್ಯ ರೇಷ್ಮೆ ಸಚಿವರು | ಉಪಾಧ್ಯಕ್ಷರು |
| 4 | ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು / ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ. | ನಿರ್ದೇಶಕರು |
| 5 | ಆಯುಕ್ತರು, ಕೃಷಿ ಇಲಾಖೆ. | ನಿರ್ದೇಶಕರು |
| 6 | ಕೃಷಿ ಇಲಾಖಾ ನಿರ್ದೇಶಕರ. ತತ್ಸಮಾನ ಹುದ್ದೆಯಲ್ಲಿರುವ ಕೃಷಿ ಇಲಾಖಾ ನಿರ್ದೇಶಕರು | ವ್ಯವಸ್ಥಾಪಕ ನಿರ್ದೇಶಕರು |
| 7 | ನಿರ್ದೇಶಕರು, ತೋಟಗಾರಿಕೆ ಇಲಾಖೆ. | ನಿರ್ದೇಶಕರು |
| 8 | ನಿರ್ದೇಶಕರು, ರೇಷ್ಮೆ ಇಲಾಖೆ. | ನಿರ್ದೇಶಕರು |
| 9 | ಉಪ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ. | ನಿರ್ದೇಶಕರು |
| 10 | ಮುಖ್ಯ ಅಭಿಯಂತರರು, ಕರ್ನಾಟಕ ಪವರ್ ಟ್ರಾನ್ಸಮಿಷನ್ ಕಾರ್ಪೋರೇಷನ್ ಲಿಮಿಟ್‌ಡ್. | ನಿರ್ದೇಶಕರು |
| 11 | ಮುಖ್ಯ ಅಭಿಯಂತರರು, ಸಣ್ಣ ನೀರಾವರಿ ಇಲಾಖೆ. | ನಿರ್ದೇಶಕರು |
| 12 | ಮುಖ್ಯ ಅಭಿಯಂತರರು, ಜಲಸಂಪನ್ಮೂಲ ಇಲಾಖೆ. | ನಿರ್ದೇಶಕರು |

(ಜೆ. ಆರ್. ವಿಶ್ವನಾಥಾಚಾರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)
18/01/13